**All India Radio: Bangalore**
**National Bulletin In Kannada**
**05.07.2026 19.35 hrs**
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**05.07.2026 19.35 hrs**

ಮುಖ್ಯಾಂಶಗಳು

೧. ವಿಕಸಿತ ಭಾರತ ಉದ್ಯೋಗ ಮತ್ತು ಜೀವನೋಪಾಯ ಖಾತರಿ ಮಿಷನ್- ವಿಬಿ ಜಿ ರಾಮ್ ಜಿ ಗಾಗಿ ಮೊದಲ ಕಂತಿನ ಹಣ ಬಿಡುಗಡೆ

೨. ಆರೋಗ್ಯವಂತ ಜನರಿಂದ ದೇಶದ ಅಭಿವೃದ್ಧಿ ಸಾಧ್ಯ, ಆರೋಗ್ಯವಾಗಿರಲು ದೈಹಿಕ ಚಟುವಟಿಕೆ ಅತ್ಯಗತ್ಯ - ಕೇಂದ್ರ ಸಚಿವ ಡಾ. ಮನ್ಸುಖ್ ಮಾಂಡವಿಯ

೩. ಕರ್ನಾಟಕಕ್ಕೆ ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವಾಲಯದ ಹಿರಿಯ ಅಧಿಕಾರಿಗಳ ತಂಡದಿಂದ ಒಂದು ವಾರದ ಅಧಿಕೃತ ಭೇಟಿ; ಪ್ರಮುಖ ಯೋಜನೆಗಳ ಅನುಷ್ಠಾನ ಮತ್ತು ಪ್ರಗತಿಯ ಮೌಲ್ಯಮಾಪನ

೪. ನ್ಯೂಜೆರ್ಸಿಯಲ್ಲಿ ಇಂದು ರಾತ್ರಿ ನಡೆಯಲಿರುವ ಫಿಫಾ ವಿಶ್ವಕಪ್ ಫುಟ್‌ಬಾಲ್ ಪಂದ್ಯ: ನಾರ್ವೆ ವಿರುದ್ಧ ಬ್ರೆಜಿಲ್ ಸೆಣಸು

---

ವಿಕಸಿತ ಭಾರತ-ಉದ್ಯೋಗ ಮತ್ತು ಜೀವನೋಪಾಯ ಖಾತರಿ ಮಿಷನ್ (ಗ್ರಾಮೀಣ) ವಿ.ಬಿ.ಜಿ ರಾಮ್‌ಜಿ ಕಾಯ್ದೆ-೨೦೨೫ ಇದೇ ತಿಂಗಳ ೧ರಿಂದ ಜಾರಿಗೆ ಬಂದಿದ್ದು ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಇಂದು ವಿಡಿಯೊ ಕಾನ್ಫರೆನ್ಸ್ ಮೂಲಕ ಈ ಮಿಷನ್ ಅಡಿಯಲ್ಲಿ ರಾಜ್ಯಗಳಿಗೆ ೨೫ ಸಾವಿರ ಕೋಟಿ ರೂಪಾಯಿಗೂ ಅಧಿಕ ಮೊತ್ತದ ಮೊದಲ ಕಂತಿನ ಹಣವನ್ನು ಬಿಡುಗಡೆ ಮಾಡಿದರು.

ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಗ್ರಾಮೀಣಾಭಿವೃದ್ಧಿ ಸಚಿವರೊಂದಿಗೆ ಯೋಜನೆಯ ಅನುಷ್ಠಾನದ ಪ್ರಗತಿಯನ್ನೂ ಪರಿಶೀಲಿಸಿದರು.

ಕಾರ್ಮಿಕರಿಗೆ ೧೫ ದಿನಗಳೊಳಗೆ ಕೂಲಿ ಪಾವತಿಸಲು ರಾಜ್ಯಗಳಿಗೆ ನೆರವು ನೀಡುವ ಉದ್ದೇಶದೊಂದಿಗೆ ಇಂದು ಮೊದಲ ಕಂತಿನ ಅನುದಾನ ಬಿಡುಗಡೆ ಮಾಡಲಾಗಿದೆ ಎಂದು ಹೇಳಿದ ಸಚಿವರು, ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯು ದೇಶಾದ್ಯಂತ ಪೂರ್ಣ ಪ್ರಮಾಣದಲ್ಲಿ ಜಾರಿಯಾಗಲು ಮೂರು ವರ್ಷಕ್ಕಿಂತ ಹೆಚ್ಚು ಸಮಯ ಹಿಡಿಸಿದ್ದು, ವಿಬಿ-ಜಿ ರಾಮ್ ಜಿ ಯೋಜನೆಯನ್ನು ಕೇವಲ ಒಂದೇ ದಿನದಲ್ಲಿ ದೇಶಾದ್ಯಂತ ಜಾರಿಗೊಳಿಸಲಾಗಿದೆ ಎಂದು ಹೇಳಿದರು.

ವಿಕಸಿತ ಭಾರತದ ಗುರಿ ಸಾಧನೆಗೆ ವೇಗ ನೀಡಲು, ಮುಂದಿನ ಐದು ವರ್ಷಗಳಲ್ಲಿ ೨ ಲಕ್ಷ ೮೬ ಸಾವಿರ ಗ್ರಾಮ ಪಂಚಾಯಿತಿಗಳಲ್ಲಿ ಏಳೂವರೆ ಲಕ್ಷ ಕೋಟಿ ರೂಪಾಯಿಗೂ ಅಧಿಕ ಹೂಡಿಕೆ ಮಾಡಲಾಗಲಿದೆ ಎಂದು ಸಚಿವರು ಅಂಕಿಅಂಶ ನೀಡಿದರು.

ಯೋಜನೆಯ ಆರಂಭಿಕ ಪ್ರಗತಿಯನ್ನು ಪರಿಶೀಲಿಸಿದ ಅವರು, ಮೊದಲ ವಾರದಲ್ಲೇ ಹೆಚ್ಚಿನ ಸಂಖ್ಯೆಯ ಗ್ರಾಮ ಪಂಚಾಯಿತಿಗಳಲ್ಲಿ ಕಾಮಗಾರಿ ಆರಂಭವಾಗಿದ್ದು, ಲಕ್ಷಾಂತರ ಗ್ರಾಮೀಣ ಕಾರ್ಮಿಕರಿಗೆ ಉದ್ಯೋಗ ದೊರೆತಿದೆ ಎಂದು ಸಂತಸ ವ್ಯಕ್ತಪಡಿಸಿದರು.

---

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ನಾಳೆ ಇಂಡೋನೇಷ್ಯಾಗೆ ಭೇಟಿ ನೀಡಲಿದ್ದಾರೆ. ಈ ಸಂದರ್ಭದಲ್ಲಿ ಅಲ್ಲಿಗೆ ಗುರುದೇವ್ ರಬೀಂದ್ರನಾಥ ಟ್ಯಾಗೋರರ ಭೇಟಿಯ ಶತಮಾನೋತ್ಸವದ ಅಂಗವಾಗಿ ೧೫ ತಿಂಗಳ ಕಾರ್ಯಕ್ರಮವನ್ನು ಇಂಡೋನೇಷ್ಯಾ ಆಚರಿಸಲಿದೆ.

ಆಕಾಶವಾಣಿಗೆ ಮಾಹಿತಿ ನೀಡಿರುವ ಇಂಡೋನೇಷ್ಯಾಗೆ ಭಾರತದ ರಾಯಭಾರಿ ಸಂದೀಪ್ ಚಕ್ರವರ್ತಿ, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಭೇಟಿಯ ವೇಳೆ ಈ ಕಾರ್ಯಕ್ರಮಗಳಿಗೆ ಚಾಲನೆ ನೀಡಲಾಗುವುದು. ಉಭಯ ದೇಶಗಳ ನಡುವಿನ ಸಾಂಸ್ಕೃತಿಕ ಬಾಂಧವ್ಯವನ್ನು ಗಟ್ಟಿಗೊಳಿಸುವ ಪ್ರದರ್ಶನಗಳು ಮತ್ತು ಸಾಂಸ್ಕೃತಿ ಕಾರ್ಯಕ್ರಮಗಳನ್ನು ವರ್ಷವಿಡೀ ಹಮ್ಮಿಕೊಳ್ಳಲಾಗುವುದು.

---

ಕೇಂದ್ರ ಸಹಕಾರ ಸಚಿವ ಅಮಿತ್ ಶಾ ನಾಳೆ ನವದೆಹಲಿಯಲ್ಲಿ ನಡೆಯಲಿರುವ ಕೇಂದ್ರ ಸಹಕಾರ ಸಚಿವಾಲಯದ ೫ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. 'ಸಹಕಾರದಿಂದ ಸಮೃದ್ಧಿ' ಪರಿಕಲ್ಪನೆಗೆ ಅನುಗುಣವಾಗಿ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಸಚಿವಾಲಯ ತಿಳಿಸಿದೆ.

ಈ ಸಂದರ್ಭದಲ್ಲಿ ಅಮಿತ್ ಶಾ ಅವರು ೨೩೨ ಧಾನ್ಯ ಸಂಗ್ರಹ ಗೋದಾಮುಗಳ ಉದ್ಘಾಟನೆ, 'ಸಹಕಾರ ವನ'ಕ್ಕೆ ಭೂಮಿಪೂಜೆ ಸೇರಿದಂತೆ ಹಲವು ಮಹತ್ವದ ಯೋಜನೆಗಳ ಶಂಕುಸ್ಥಾಪನೆ ಹಾಗೂ ಉದ್ಘಾಟನೆ ನೆರವೇರಿಸಲಿದ್ದಾರೆ.

---

ರಾಷ್ಟ್ರೀಯ ಇ-ಆಡಳಿತ ಪ್ರಶಸ್ತಿ-೨೦೨೬ರಲ್ಲಿ ಭಾರತೀಯ ವೈದ್ಯಕೀಯ ಸಂಶೋಧನಾ ಮಂಡಳಿ-ಐಸಿಎಂಆರ್ ನ ಪ್ರಮುಖ ಉಪಕ್ರಮವಾದ ಐಸಿಎಂಆರ್-ಮೈಂಡ್ಸ್ ರಾಷ್ಟ್ರೀಯ ಆರೋಗ್ಯ ಸಂಶೋಧನಾ ಆದ್ಯತಾ ಯೋಜನೆಗೆ ಚಿನ್ನ ಲಭಿಸಿದೆ.

ಕೇಂದ್ರ ಸಿಬ್ಬಂದಿ, ಸಾರ್ವಜನಿಕ ಕುಂದುಕೊರತೆಗಳು ಮತ್ತು ಪಿಂಚಣಿ ಖಾತೆ ರಾಜ್ಯ ಸಚಿವ ಡಾ. ಜಿತೇಂದ್ರ ಸಿಂಗ್ ಅವರು ಈ ಪ್ರಶಸ್ತಿ ಪ್ರದಾನ ಮಾಡಿದರು.

ಐಸಿಎಂಆರ್ ಮಹಾನಿರ್ದೇಶಕ ಡಾ. ರಾಜೀವ್ ಬಾಲ್ಟ್ ಮಾತನಾಡಿ, ಸಂಕೀರ್ಣ ಸಾರ್ವಜನಿಕ ಆರೋಗ್ಯ ಸವಾಲುಗಳಿಗೆ ಪರಿಹಾರ ಕಂಡುಹಿಡಿಯಲು ದತ್ತಾಂಶ ಹಾಗೂ ತಂತ್ರಜ್ಞಾನ ಆಧಾರಿತ ಪರಿಹಾರಗಳನ್ನು ಕಂಡುಕೊಳ್ಳುವಲ್ಲಿ ಐಸಿಎಂಆರ್ ಮುಂದೆಯೂ ಮುಂಚೂಣಿಯಲ್ಲಿರಲಿದೆ ಎಂದು ಹೇಳಿದರು.

---

ನವದೆಹಲಿಯಲ್ಲಿ ಇಂದು ನಡೆದ ಫಿಟ್ ಇಂಡಿಯಾ ಸಂಡೇಸ್ ಆನ್ ಸೈಕಲ್ ಉಪಕ್ರಮದ ೮೦ ನೇ ಆವೃತ್ತಿಯಲ್ಲಿ ಕೇಂದ್ರ ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವ ಡಾ. ಮನ್ಸುಖ್ ಮಾಂಡವಿಯ ಭಾಗವಹಿಸಿದ್ದರು.

ಆಧ್ಯಾತ್ಮಿಕ ನಾಯಕ ಸತ್ಯ ಸಾಯಿ ಬಾಬಾ ಅವರ ೧೦೦ ನೇ ಜನ್ಮ ದಿನಾಚರಣೆ ಅಂಗವಾಗಿ ಸತ್ಯ ಸಾಯಿ ಸೇವಾ ಸಂಸ್ಥೆಗಳ ಸಹಯೋಗದೊಂದಿಗೆ ಈ ಕಾರ್ಯಕ್ರಮ ಆಯೋಜಿಸಲಾಗಿತ್ತು.

೯ ಸಾವಿರಕ್ಕೂ ಹೆಚ್ಚು ಜನರು ಜುಂಬಾ ಮತ್ತು ಯೋಗಾಭ್ಯಾಸ ಮಾಡುವ ಜೊತೆಗೆ ಸಮುದಾಯ ಓಟ ಮತ್ತು ಸೈಕಲ್ ಸವಾರಿಯಲ್ಲಿ ಭಾಗವಹಿಸಿದರು. ನಡವಳಿಕೆಯಲ್ಲಿ ಬದಲಾವಣೆ ಉತ್ತೇಜಿಸುವುದು ಮತ್ತು ಕ್ರಿಯಾಶೀಲ ಜೀವನಶೈಲಿಯನ್ನು ಪ್ರೋತ್ಸಾಹಿಸುವುದು ಈ ಉಪಕ್ರಮದ ಗುರಿಯಾಗಿದೆ.

ಮಾಧ್ಯಮಗಳೊಂದಿಗೆ ಮಾತನಾಡಿದ ಡಾ. ಮಾಂಡವಿಯ, ಹೃದಯ, ದೇಹ ಮತ್ತು ಮನಸ್ಸನ್ನು ಆರೋಗ್ಯವಾಗಿಡಲು ಸೈಕ್ಲಿಂಗ್ ಪೂರಕ ಎಂದು ಹೇಳಿದರು. ಸೈಕಲ್ ಸವಾರಿಯಿಂದ ಆರೋಗ್ಯದ ಮೇಲಾಗುವ ಪ್ರಯೋಜನಗಳನ್ನು ವಿವರಿಸಿದ ಸಚಿವರು, ನಗರಗಳ ಮಾಲಿನ್ಯ ಮತ್ತು ಸಂಚಾರ ದಟ್ಟಣೆಗೆ ಸೈಕ್ಲಿಂಗ್ ಪರಿಹಾರವಾಗಿದೆ ಎಂದು ವಿವರಿಸಿದರು.

ಉತ್ತಮ ಆರೋಗ್ಯಕ್ಕಾಗಿ ಜನರು ಪ್ರತಿದಿನ ಕನಿಷ್ಠ ಒಂದು ಗಂಟೆಯಾದರೂ ಮೊಬೈಲ್ ಬಳಸದೇ ಆ ಸಮಯವನ್ನು ದೈಹಿಕ ಚಟುವಟಿಕೆ ಮತ್ತು ಕ್ರೀಡೆಗಳಿಗೆ ಮೀಸಲಿಡಬೇಕೆಂದು ಅವರು ಮನವಿ ಮಾಡಿದರು.

---

ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವಾಲಯದ ಹಿರಿಯ ಅಧಿಕಾರಿಗಳ ತಂಡ ಇಂದಿನಿಂದ ಒಂದು ವಾರ ಕರ್ನಾಟಕಕ್ಕೆ ಅಧಿಕೃತ ಭೇಟಿ ನೀಡಿದ್ದು, ರಾಜ್ಯ ಸರ್ಕಾರದ ಅಧಿಕಾರಿಗಳೊಂದಿಗೆ ಪರಿಶೀಲನಾ ಸಭೆಗಳನ್ನು ನಡೆಸಲಿದೆ ಹಾಗೂ ಪ್ರಮುಖ ಯೋಜನೆಗಳ ಅನುಷ್ಠಾನ ಮತ್ತು ಪ್ರಗತಿಯ ಮೌಲ್ಯಮಾಪನ ಮಾಡುವುದು ಈ ಭೇಟಿಯ ಮುಖ್ಯ ಉದ್ದೇಶವಾಗಿದೆ.

ಬೆಳಗಾವಿ ಮತ್ತು ದಾವಣಗೆರೆ ಜಿಲ್ಲೆಗಳಿಗೆ ಭೇಟಿ ನೀಡಲಿರುವ ಈ ತಂಡ, ಕ್ಷೇತ್ರಮಟ್ಟದಲ್ಲಿ ವಿಕಸಿತ ಭಾರತ - ಉದ್ಯೋಗ ಮತ್ತು ಜೀವನೋಪಾಯ ಖಾತರಿ ಮಿಷನ್ (ಗ್ರಾಮೀಣ) ವಿಬಿ - ಜಿ ರಾಮ್ ಜಿ ಯೋಜನೆಯ ಅನುಷ್ಠಾನಕ್ಕೆ ಬೆಂಬಲ ನೀಡುವುದರ ಜೊತೆಗೆ ಅದರ ಪ್ರಗತಿಯನ್ನು ಪರಿಶೀಲಿಸಲಿದೆ.

ಜಿಲ್ಲಾಡಳಿತಗಳ ಸನ್ನದ್ಧತೆಯನ್ನು ಅಧಿಕಾರಿಗಳು ಮೌಲ್ಯಮಾಪನ ಮಾಡಲಿದ್ದು, ಯೋಜನೆಯ ಅನುಷ್ಠಾನದಲ್ಲಿರುವ ಸವಾಲುಗಳನ್ನು ಗುರುತಿಸಿ, ಅವುಗಳನ್ನು ಸಕಾಲದಲ್ಲಿ ಪರಿಹರಿಸುವ ಮೂಲಕ ಯೋಜನೆಯ ಪರಿಣಾಮಕಾರಿ ಜಾರಿಗೆ ನೆರವಾಗಲಿದ್ದಾರೆ.

---

ಹಿರಿಯ ಬುಡಕಟ್ಟು ನಾಯಕ ಮತ್ತು ಗುಜರಾತ್‌ನ ಮಾಜಿ ಅರಣ್ಯ ಸಚಿವ ಮೋಹನ್ ಸಿನ್ಹ ರಾತ್ವಾ ಅವರು ಇಂದು ನಿಧನರಾದರು. ಅವರಿಗೆ ೮೨ ವರ್ಷ ವಯಸ್ಸಾಗಿತ್ತು. ಅವರು ಅನಾರೋಗ್ಯದಿಂದ ಬಳಲುತ್ತಿದ್ದರು.

ಗುಜರಾತ್‌ನ ಬುಡಕಟ್ಟು ರಾಜಕೀಯದಲ್ಲಿ ಪ್ರಮುಖ ವ್ಯಕ್ತಿಯಾಗಿದ್ದ ಅವರು, ೧೦ ಬಾರಿ ಶಾಸಕರಾಗಿದ್ದರು.

ಮೋಹನ್ ಸಿನ್ಹ ಅವರ ನಿಧನಕ್ಕೆ ಪ್ರಧಾನಮಂತ್ರಿ ನರೇಂದ್ರ ಮೋದಿ ಸೇರಿದಂತೆ ಗಣ್ಯರು ಶೋಕ ವ್ಯಕ್ತಪಡಿಸಿದ್ದಾರೆ.

---

ಕೈಲಾಸ ಮಾನಸ ಸರೋವರ ಯಾತ್ರೆಗೆ ಚಂಪಾವತ್ ಜಿಲ್ಲೆಯ ತಾನಕ್‌ಪುರ್ ನಿಂದ ಉತ್ತರಾಖಂಡ ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ಇಂದು ಚಾಲನೆ ನೀಡಿದರು. ಮೊದಲ ತಂಡದಲ್ಲಿ ಓರ್ವ ವೈದ್ಯರು, ೩೪ ಪುರುಷರು ಮತ್ತು ೧೫ ಮಹಿಳೆಯರು ಸೇರಿ ೪೯ ಯಾತ್ರಿಕರಿದ್ದಾರೆ.

ಈ ಸಂದರ್ಭದಲ್ಲಿ ಮಾತನಾಡಿದ ಮುಖ್ಯಮಂತ್ರಿ ಧಾಮಿ, ಕೈಲಾಸ-ಮಾನಸಸರೋವರ ಯಾತ್ರೆಯು ಕೇವಲ ಧಾರ್ಮಿಕ ಯಾತ್ರೆಯಲ್ಲ, ಅದು ಆಧ್ಯಾತ್ಮಿಕ ಜಾಗೃತಿ, ಸಾಂಸ್ಕೃತಿಕ ಏಕತೆ ಮತ್ತು ರಾಷ್ಟ್ರೀಯ ಸೌಹಾರ್ದತೆಯ ಪ್ರತೀಕವಾಗಿದೆ ಎಂದು ಹೇಳಿದರು.

---

ವಾಣಿಜ್ಯ, ವಲಸೆ ಸೇರಿದಂತೆ ವಿವಿಧ ನೀತಿ ನಿರೂಪಣೆ ವಿಷಯಗಳಲ್ಲಿ ವಿದೇಶಾಂಗ ಸಚಿವಾಲಯಕ್ಕೆ ಸಲಹೆ ನೀಡುತಿರುವುದಾಗಿ ಸಾಮಾಜಿಕ ಜಾಲತಾಣಗಳಲ್ಲಿ ಕೆಲವರು ಹೇಳಿಕೊಳ್ಳುತ್ತಿದ್ದು, ಇದರಲ್ಲಿ ಸತ್ಯಾಂಶವಿಲ್ಲ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಸತ್ಯ ಶೋಧನಾ ಘಟಕ ತಿಳಿಸಿದೆ.

---

ಇರಾನ್‌ನ ಮಾಜಿ ಪರಮೋಚ್ಚ ನಾಯಕ ದಿವಂಗತ ಆಯತುಲ್ಲಾ ಅಲಿ ಖಮೇನಿ ಅವರ ಅಂತ್ಯಕ್ರಿಯೆಯ ಧಾರ್ಮಿಕ ವಿಧಿವಿಧಾನಗಳು ಇಂದು ತೆಹ್ರಾನ್‌ನಲ್ಲಿ ನಡೆದವು. ದೇಶದ ರಾಜಕೀಯ, ಮಿಲಿಟರಿ ಹಾಗೂ ಧಾರ್ಮಿಕ ನಾಯಕರು ಅಂತಿಮ ಪ್ರಾರ್ಥನೆಯಲ್ಲಿ ಭಾಗಿಯಾಗಿದ್ದರು.

_____________________

ಸ್ವಿಟ್ಜರ್‌ಲ್ಯಾಂಡ್‌ನ ಜಿನಿವಾದಲ್ಲಿ ನಾಳೆಯಿಂದ ಮೂರು ದಿನ ನಡೆಯಲಿರುವ ಗ್ರಾಹಕರ ಸಂರಕ್ಷಣಾ ಕಾನೂನು ಮತ್ತು ನೀತಿ ಕುರಿತ ತಜ್ಞರ ಅಂತರಸರ್ಕಾರಿ ಗುಂಪಿನ ಒಂಭತ್ತನೇ ಸಭೆಯ ಅಧ್ಯಕ್ಷತೆಯನ್ನು ಭಾರತ ವಹಿಸಲಿದೆ.

ಈ ಸಭೆಯಲ್ಲಿ ವಿಶ್ವಸಂಸ್ಥೆಯ ಸದಸ್ಯ ರಾಷ್ಟ್ರಗಳು, ಅಂತರರಾಷ್ಟ್ರೀಯ ಸಂಸ್ಥೆಗಳು, ಗ್ರಾಹಕರ ಸಂರಕ್ಷಣಾ ಪ್ರಾಧಿಕಾರಗಳು, ಶಿಕ್ಷಣ ತಜ್ಞರು ಸೇರಿದಂತೆ ಸಂಬಂಧಿತರು ಭಾಗವಹಿಸಿ, ಗ್ರಾಹಕರ ಸಂರಕ್ಷಣಾ ಕಾನೂನು ಮತ್ತು ನೀತಿಗೆ ಸಂಬಂಧಿಸಿದ ವಿಷಯಗಳ ಕುರಿತು ಚರ್ಚಿಸಲಿದ್ದಾರೆ.

_____________________

ಬ್ರಿಕ್ಸ್ ರಾಷ್ಟ್ರಗಳ ಮಾದಕವಸ್ತು ನಿಯಂತ್ರಣ ಸಂಸ್ಥೆಗಳ ಮುಖ್ಯಸ್ಥರ ಎರಡು ದಿನಗಳ ಸಭೆಯು ನಾಳೆಯಿಂದ ಅಸ್ಸಾಂನ ಗುವಾಹಟಿಯಲ್ಲಿ ಆರಂಭವಾಗಲಿದೆ. ಈ ಸಭೆಗೆ ಭಾರತ ಆತಿಥ್ಯ ವಹಿಸಲಿದೆ.

ಬ್ರಿಕ್ಸ್ ಸದಸ್ಯ ರಾಷ್ಟ್ರಗಳ ಮಾದಕವಸ್ತು ನಿಯಂತ್ರಣ ಸಂಸ್ಥೆಗಳ ಮುಖ್ಯಸ್ಥರು ಹಾಗೂ ಹಿರಿಯ ಅಧಿಕಾರಿಗಳು ಈ ಸಭೆಯಲ್ಲಿ ಭಾಗವಹಿಸಲಿದ್ದು, ಸಂಸ್ಥೆಗಳ ನಡುವಿನ ನಿರಂತರ ಸಹಕಾರವನ್ನು ಬಲಪಡಿಸುವುದು ಮತ್ತು ಕಾರ್ಯಾಚರಣಾ ಮಟ್ಟದಲ್ಲಿ ಇನ್ನಷ್ಟು ಸಮನ್ವಯ ಸಾಧಿಸುವುದು ಇದರ ಪ್ರಮುಖ ಉದ್ದೇಶವಾಗಿದೆ ಎಂದು ಕೇಂದ್ರ ಗೃಹ ಸಚಿವಾಲಯ ತಿಳಿಸಿದೆ.

_____________________

ನ್ಯೂಜೆರ್ಸಿಯಲ್ಲಿ ಇಂದು ನಡೆಯಲಿರುವ ಫಿಫಾ ವಿಶ್ವಕಪ್ ಫುಟ್‌ಬಾಲ್ ಪಂದ್ಯಾವಳಿಯ ೧೬ ನೇ ಸುತ್ತಿನ ಪಂದ್ಯದಲ್ಲಿ ನಾರ್ವೆ ವಿರುದ್ಧ ಬ್ರೆಜಿಲ್ ಸೆಣಸಲಿದೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೧.೩೦ ಕ್ಕೆ ಆರಂಭವಾಗಲಿದೆ.

ನಾಳೆ ಬೆಳಗ್ಗೆ ೫.೩೦ ಕ್ಕೆ ನಡೆಯಲಿರುವ ಇನ್ನೊಂದು ಪ್ರಿ-ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಮೆಕ್ಸಿಕೊ ತಂಡವನ್ನು ಇಂಗ್ಲೆಂಡ್ ಎದುರಿಸಲಿದೆ.

___________ ಮುಕ್ತಾಯ __________